120

## ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ:- ಬಳ್ಳಾರಿ ಜಿಲ್ಲೆ ಹೊಸಪೇಟೆ ಸ್ಥಳೀಯ ಯೋಜನಾ ಪ್ರದೇಶದ ಮಹಾಯೋಜನೆ (ಪರಿಷ್ಕೃತ -1)ಕ್ಕೆ ಸರ್ಕಾರದ ಅಂತಿಮ ಅನುಮೋದನೆ ನೀಡುವ ಬಗ್ಗೆ.

ಓದಲಾಗಿದೆ:- (1) ಸರ್ಕಾರದ ಆದೇಶ ಸಂಖ್ಯೆ:ನಅಇ 138 ಬೆಮಪ್ರಾ 2007 ದಿನಾಂಕ:3-7-2007.

(2)ಹೊಸಪೇಟೆ ನಗರಾಭಿವೃದ್ಧಿ ಪ್ರಾಧಿಕಾರದ ಪತ್ರ ಸಂಖ್ಯೆ:ಹೋನಪ್ರಾ/ಮಾಸ್ಟರ್ ಪ್ಲಾನ್/0607 ದಿನಾಂಕ:10-3-2008.

(3)ನಗರ ಯೋಜನಾ ನಿರ್ದೇಶಕರ ಕಛೇರಿಯ ಏಕ ಕಡತ ಸಂಖ್ಯೆ:ನಯೋ/ಉನಿ(ಯೋವಿ):ಹೊಸಪೇಟೆ:ಮಾ.ಪ್ಲಾ:176:2007-08ರಲ್ಲಿ ನೀಡಿರುವ ಅಭಿಪ್ರಾಯ ದಿನಾಂಕ:1-4-2008.

*****

ಪ್ರಸ್ತಾವನೆ:

ಮೇಲೆ ಓದಲಾದ (1)ರ ಸರ್ಕಾರಿ ಆದೇಶದಲ್ಲಿ ಹೊಸಪೇಟೆ ಸ್ಥಳೀಯ ಯೋಜನಾ ಪ್ರದೇಶದ ಮಹಾಯೋಜನೆಗೆ (ಪರಿಷ್ಕೃತ -1), ತಾತ್ಕಾಲಿಕ ಅನುಮೋದನೆ ನೀಡಿ ಆದೇಶಿಸಲಾಗಿದೆ.

ಮೇಲೆ ಓದಲಾದ (2)ರ ಪತ್ರದಲ್ಲಿ ಹೊಸಪೇಟೆ ನಗರಾಭಿವೃದ್ಧಿ ಪ್ರಾಧಿಕಾರವು ಹೊಸಪೇಟೆ ಪಟ್ಟಣದ ಸ್ಥಳೀಯ ಯೋಜನಾ ಪ್ರದೇಶಕ್ಕೆ ತಯಾರಿಸಿರುವ ಮಹಾಯೋಜನೆ (ಪರಿಷ್ಕೃತ -1)ಕ್ಕೆ ಕುರಿತು ಕರ್ನಾಟಕ ನಗರ ಮತ್ತು ಗ್ರಾಮಾಂತರ ಕಾಯ್ದೆ 1961ರ ಕಲಂ 13(1)ರನ್ವಯ ಆಗತ್ಯ ಕ್ರಮ ಜರುಗಿಸಿ, ಮಹಾಯೋಜನೆ (ಪರಿಷ್ಕೃತ ‑1)ರ ನಕ್ಷೆಗಳನ್ನು ಹಾಗೂ ವರದಿಯನ್ನು ತಯಾರಿಸಿ, ಸರ್ಕಾರದ ಅಂತಿಮ ಅನುಮೋದನೆಗೆ ಸಲ್ಲಿಸಿರುತ್ತಾರೆ.

ಮೇಲೆ ಓದಲಾದ (3)ರ ನಗರ ಯೋಜನಾ ನಿರ್ದೇಶಕರ ಕಛೇರಿಯ ಏಕ ಕಡತದಲ್ಲಿ 2001ರ ಜನಗಣತಿಯಂತೆ ಹೊಸಪೇಟೆ ಸ್ಥಳೀಯ ಯೋಜನಾ ಪ್ರದೇಶದ ಜನಸಂಖ್ಯೆಯು 1,64,500 ಇದ್ದು, 20 ವರ್ಷಗಳ ಯೋಜನಾ ಅವಧಿಗೆ ಅಂದರೆ, 2021ನೇ ಇಸವಿಗೆ 3,10,000 ಜನಸಂಖ್ಯೆಯು ಆಗಬಹುದೆಂದು ಅಂದಾಜಿಸಿ ಹೊಸಪೇಟೆ ಮಹಾ ಯೋಜನೆಯನ್ನು ತಯಾರಿಸಲಾಗಿದೆ. ಹೊಸಪೇಟೆ ಸ್ಥಳೀಯ ಯೋಜನಾ ಪ್ರದೇಶದ ವಿಸ್ತೀರ್ಣವು 23,890 ಹೆಕ್ಟೇರ್ (238.98 ಚ.ಕ.ಮೀ) ಗಳಷ್ಟಿರುತ್ತದೆ. 2021ನೇ ಇಸವಿಗೆ ಪ್ರಸ್ತಾಪಿಸಿರುವ ನಗರೀಕರಣ ಪ್ರದೇಶದ (ಕನರ್ ಬೇಷನ್ ಏರಿಯಾ) ವಿಸ್ತೀರ್ಣವು ಒಟ್ಟು 3160.00 ಹೆಕ್ಟೇರ್ ಪ್ರದೇಶವನ್ನು ಪ್ರಸ್ತಾಪಿಸಿ ಯೋಜನೆಯನ್ನು ರೂಪಿಸಿದೆ. ಹೊಸಪೇಟೆ ಪಟ್ಟಣದ ಜನಸಂಖ್ಯೆಯ ಸಾಮಾಜಿಕ ಮತ್ತು ಆರ್ಥಿಕ ಸ್ಥಿತಿಗತಿ, ಹಾಲಿ ಬೆಳವಣಿಗೆಯ ಗತಿ, ರಸ್ತೆಗಳ ಹಾಲಿ ಪರಿಚಲನ ವ್ಯವಸ್ಥೆಯ

ಸಮಸ್ಯೆಗಳನ್ನು ವಿಶ್ಲೇಷಿಸಿ ಯೋಜನಾ ತತ್ವಗಳಿಗನುಗುಣವಾಗಿ ಹಾಗೂ ಮಹಾ ಯೋಜನೆ ತಯಾರಿಕೆ ಬಗ್ಗೆ ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ 1961ರ ಕಲಂ 9 ರಿಂದ 12ರವರೆಗೆ ನಿಗದಿಪಡಿಸಿರುವ ಅಂಶಗಳನ್ನು ಪರಿಗಣಿಸಿ ನಗರ ಮುಂದಿನ ಬೆಳವಣಿಗೆಗೆ ವಿವಿಧ ಉಪಯೋಗಗಳಿಗೆ ಬೇಕಾಗಬಹುದಾದ ಭೂಮಿಯನ್ನು ಈ ಕೆಳಗಿನಂತೆ ಕಾಯ್ದಿರಿಸಿ ಮಹಾ ಯೋಜನೆ ತಯಾರಿಸಿದೆ. ಸದರಿ ಯೋಜನೆಯಲ್ಲಿ ವಸತಿಗಾಗಿ ಶೇ.36.70, ವಾಣಿಜ್ಯಕ್ಕಾಗಿ ಶೇ.8.26, ಕೈಗಾರಿಕೆಗಾಗಿ ಶೇ.17.57, ಸಾರ್ವಜನಿಕ:ಅರೆ ಸಾರ್ವಜನಿಕಕ್ಕಾಗಿ ಶೇ.5.59, ಉದ್ಯಾನವನ ಮತ್ತು ಬಯಲು ಜಾಗಕ್ಕಾಗಿ ಶೇ.13.00, ಸ್ಮಾರಕಗಳಿಗಾಗಿ ಶೇ.0.03 ನಿಷೇದಿತ ಜಾಗಗಾಗಿ ಶೇ.0.17, ಸಾರ್ವಜನಿಕ ಸೌಲಭ್ಯಕ್ಕಾಗಿ ಶೇ.0.49 ಹಾಗೂ ಸಾರಿಗೆ ಮತ್ತು ಸಂಪರ್ಕಕ್ಕಾಗಿ ಶೇ.18.19 ವಿಸ್ತೀರ್ಣವನ್ನು ನಿಗದಿಪಡಿಸಲಾಗಿದೆ. ಹಾಗೂ ಯೋಜನೆಯನ್ನು ಅನುಷ್ಠಾನಗೊಳಿಸಲು ವಲಯ ನಿಯಮಾವಳಿಗಳನ್ನು ರೂಪಿಸಲಾಗಿದ್ದು, ಈ ಮಹಾ ಯೋಜನೆಗೆ ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ 1961ರ ಕಲಂ 13(3)ರನ್ವಯ ಅಂತಿಮ ಅನುಮೋದನೆ ನೀಡಲು ಶಿಫಾರಸ್ಸು ಮಾಡಿ ಸರ್ಕಾರಕ್ಕೆ ಪ್ರಸ್ತಾವನೆಯನ್ನು ಸಲ್ಲಿಸಿರುತ್ತಾರೆ. ಅದರಂತೆ ಪ್ರಸ್ತಾವನೆಯನ್ನು ಪರಿಶೀಲಿಸಿ, ಈ ಕೆಳಕಂಡಂತೆ ಆದೇಶ ಹೊರಡಿಸಲಾಗಿದೆ.

## ಸರ್ಕಾರದ ಆದೇಶ ಸಂಖ್ಯೆ: ನಅಇ 84 ಬೆಮಪ್ರಾ 2008
## ಬೆಂಗಳೂರು ದಿನಾಂಕ 27-05-2008.

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನಲೆಯಲ್ಲಿ ಹೊಸಪೇಟೆ ಪಟ್ಟಣದ ಸ್ಥಳೀಯ ಯೋಜನಾ ಪ್ರದೇಶಕ್ಕೆ ರೂಪಿಸಿರುವ ಮಹಾ ಯೋಜನೆ (ಪರಿಷ್ಕೃತ-1) ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ 1961ರ ಕಲಂ 13(3) ರನ್ವಯ ಅಂತಿಯ ಅನುಮೋದನೆಯನ್ನು ನೀಡಲಾಗಿದೆ. ಮಹಾಯೋಜನೆಗೆ ಅಂತಿಮ ಅನುಮೋದನೆ ನೀಡಿದ ಗುರುತಾಗಿ ವರದಿ ಹಾಗೂ ನಕ್ಷೆಗಳ ಮೇಲೆ ಸರ್ಕಾರದ ಮುದ್ರೆಯನ್ನು ಹಾಕಲಾಗಿದೆ.

ಭಾರತ ರಾಷ್ಟ್ರಾಧ್ಯಕ್ಷರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಸಿ.ಟಿ.ನಾರಾಯಣಸ್ವಾಮಿ)
ಸರ್ಕಾರದ ಅಧೀನ ಕಾರ್ಯದರ್ಶಿ,
ನಗರಾಭಿವೃದ್ಧಿ ಇಲಾಖೆ.

ಪ್ರತಿಯನ್ನು:

1)ನಿರ್ದೇಶಕರು, ನಗರ ಯೋಜನೆ ಇಲಾಖೆ, ಬೆಂಗಳೂರು.
2)ಆಯುಕ್ತರು, ನಗರಾಭಿವೃದ್ಧಿ ಪ್ರಾಧಿಕಾರ, ಹೊಸಪೇಟೆ.
3)ಸಹಾಯಕ ನಿರ್ದೇಶಕರು, ನಗರ ಯೋಜನೆ ಇಲಾಖೆ, ಬಳ್ಳಾರಿ.
4)ಕರ್ನಾಟಕ ರಾಜ್ಯಪತ್ರ.
5)ಶಾಖಾ ರಕ್ಷಾ ಕಡತ/ ಹೆಚ್ಚುವರಿ ಪ್ರತಿ.